**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ(MGIRED)ಗೆ 2022-23ನೇ ಸಾಲಿನ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ (MGIRED) ರವರ ಪತ್ರ ಸಂಖ್ಯೆ:ಎಂಜಿಐಂ/ಸಆಬಿ/03/2022, ದಿನಾಂಕ:28-04-2022.

**ಪ್ರಸ್ತಾವನೆ:**

2022-23ನೇ ಸಾಲಿನ ಆಯವ್ಯಯದಡಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣ ಇಂಧನ ಸಂಸ್ಥೆಗಳು(MGIRED) ಲೆಕ್ಕ ಶೀರ್ಷಿಕೆ:2501-04-105-0-02-059ರಡಿ ರೂ.640.00ಲಕ್ಷಗಳನ್ನು ಒದಗಿಸಲಾಗಿದೆ.

ಮೇಲೆ ಓದಲಾದ ಪತ್ರದನ್ವಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ(MGIRED)ಯ ತರಬೇತಿ ಹಾಗೂ ಆವರ್ತಕ ವೆಚ್ಚಗಳಿಗಾಗಿ 2022-23ನೇ ಸಾಲಿಗೆ ಮೊದಲನೇ ಕಂತಿನ ಅನುದಾನ ರೂ.160.00ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಆದರಂತೆ, 2022-23ನೇ ಸಾಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣ ಇಂಧನ ಸಂಸ್ಥೆಗಳು(MGIRED) ಲೆಕ್ಕ ಶೀರ್ಷಿಕೆ: 2501-04-105-0-02-059ರಡಿ ಹಂಚಿಕೆ ಮಾಡಿರುವ ರೂ.640.00ಲಕ್ಷಗಳಲ್ಲಿ ಮೊದಲನೇ ಕಂತಿನ ಅನುದಾನ ರೂ.160.00(ಒಂದು ನೂರ ಅರವತ್ತು ಲಕ್ಷಗಳು ಮಾತ್ರ)ಲಕ್ಷಗಳನ್ನು ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ(MGIRED), ಬೆಂಗಳೂರು ಇವರಿಗೆ ಬಿಡುಗಡೆ ಮಾಡಲು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 246 ಜಿಪಸ 2022, ದಿನಾಂಕ:13-05-2022.**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮೀಣ ಇಂಧನ ಸಂಸ್ಥೆಗಳು(MGIRED) ಲೆಕ್ಕ ಶೀರ್ಷಿಕೆ: 2501-04-105-0-02-059ರಡಿ ಹಂಚಿಕೆ ಮಾಡಿರುವ ರೂ.640.00ಲಕ್ಷಗಳಲ್ಲಿ ಮೊದಲನೇ ಕಂತಿನ ಅನುದಾನ ರೂ.160.00(ಒಂದು ನೂರ ಅರವತ್ತು ಲಕ್ಷಗಳು ಮಾತ್ರ)ಲಕ್ಷಗಳನ್ನು ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ(MGIRED), ಬೆಂಗಳೂರು ಇವರಿಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಸದರಿ ಅನುದಾನವನ್ನು ವೇತನ ಹಾಗೂ ವೇತನೇತರ ವೆಚ್ಚಗಳಿಗೆ ವಿನಿಯೋಗಿಸುವುದು ಹಾಗೂ ನಿಗಧಿತ ನಮೂನೆಯಲ್ಲಿ ಸರ್ಕಾರಕ್ಕೆ ಉಪಯೋಗಿತಾ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 01 ಟಿಎಫ್‌ಪಿ 2022, ದಿನಾಂಕ: 04-04-2022ರಲ್ಲಿ ಸಂಬಂಧಿಸಿದ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿರವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಎಂ.ಎಂ. [signature] 13/5/22
(ಎಂ.ಎಂ.ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
13/5/22

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಮಹಾತ್ಮ ಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆ, ಜಕ್ಕೂರು, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಮತ್ತು ಅಭಿವೃದ್ಧಿ ಮಂಡಳಿ, ಕುಮಾರ ಕೃಪ, ಪ್ಯಾರಲಲ್ ರಸ್ತೆ, ಬೆಂಗಳೂರು.
7. ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ರಕ್ಷಾ ಕಡತಕ್ಕೆ /ಹೆಚ್ಚುವರಿ ಪ್ರತಿ.

**ಪ್ರತಿಯನ್ನುಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಆಪ್ತ ಸಹಾಯಕ.
4. ನಿರ್ದೇಶಕರು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಆಪ್ತ ಸಹಾಯಕ.